ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001

E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ಶುಲ್ಕ ಮರುಪಾವತಿ/2016-17 ದಿನಾಂಕ: 29/08/2017

: : ಜ್ಞಾಪನ : : : : ಅತೀ ತುರ್ತು : :

ವಿಷಯ: 2016-17ನೇ ಸಾಲಿನಲ್ಲಿ ಆರ್.ಟಿ.ಇ ಆನ್‌ಲೈನ್ ತಂತ್ರಾಂಶದಲ್ಲಿ ಶುಲ್ಕಮರುಪಾವತಿ ನೀಡಬೇಕಾದ ಅಲ್ಪಸಂಖ್ಯಾತ ಶಾಲೆಗಳ ಮಾಹಿತಿ ಒದಗಿಸುವ ಬಗ್ಗೆ.

ಉಲ್ಲೇಖ:
1. ದಿನಾಂಕ: 09-01-2017ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ಸೂಚನೆ.
2. ದಿನಾಂಕ: 19/12/2016 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ)ಮತ್ತು ತಾಲ್ಲೂಕು/ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
3. ದಿನಾಂಕ:25/11/2016 ರಂದು ಮಾನ್ಯ ಸಹನಿರ್ದೇಶಕರು(ಆಡಳಿತ) ಇವರ ಅಧ್ಯಕ್ಷತೆಯಲ್ಲಿ ಖಜಾನೆ ಇಲಾಖೆಯ ಸಹಯೋಗದೊಂದಿಗೆ ನಡೆದ ಖಜಾನೆ-2 ತರಬೇತಿ.
4. ದಿನಾಂಕ:21/11/2016ರಂದು ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ) ಮತ್ತು ತಾಲ್ಲೂಕು/ವಲಯ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
5. ದಿನಾಂಕ: 16/11/2016 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದಲ್ಲಿ ನಡೆದ ಜಿಲ್ಲಾ ಮಟ್ಟದ ಆರ್.ಟಿ.ಇ ನೋಡಲ್ ಅಧಿಕಾರಿಗಳು ಮತ್ತು ಪ್ರೋಗ್ರಾಮರ್‌ಗಳ ತರಬೇತಿ.
6. ದಿನಾಂಕ: 14/11/2016 ರಲ್ಲಿ ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಇವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
7. ದಿನಾಂಕ:23/01/2017 ರಲ್ಲಿ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
8. ದಿನಾಂಕ: 10/02/2017 ರಂದು ಮಾನ್ಯ ಸರ್ಕಾರದ ಪ್ರಧಾನಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರು(ಆಡಳಿತ) ಮತ್ತು ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳೊಂದಿಗೆ ನಡೆದ ರಾಜ್ಯ ಮಟ್ಟದ ವಿಡಿಯೋ ಕಾನ್ಫರೆನ್ಸ್.
9. ದಿನಾಂಕ: 07-04-2017 ರಂದು ಮಾನ್ಯ ಆಯುಕ್ತರು ಹಾಗೂ ರಾಜ್ಯ ಕೊಳಚೆ ನಿರ್ಮೂಲನಾ ಮಂಡಳಿ ಅಧಿಕಾರಿಗಳ ಜೊತೆಯಲ್ಲಿ ನಡೆದ ರಾಜ್ಯ ಮಟ್ಟದ ಉಪನಿರ್ದೇಶಕರು (ಆಡಳಿತ) ಮತ್ತು ಸ್ಥಳಿಯ ನೊಂದಾಯಿತ ಸಂಘ ಸಂಸ್ಥೆಗಳ ಜೊತೆಯಲ್ಲಿ ನಡೆದ ರಾಜ್ಯಮಟ್ಟದ ವಿಡಿಯೋ ಕಾನ್ಫರೆನ್ಸ್.
10. ಉಪನಿರ್ದೇಶಕರು(ಆಡಳಿತ), ಕ್ಷೇತ್ರಶಿಕ್ಷಣಾಧಿಕಾರಿಗಳು, ಶಾಲಾ ಆಡಳಿತ ಮಂಡಳಿಗಳ ಸಂಘ ಸಂಸ್ಥೆಗಳು ಹಾಗೂ ಶಾಲಾ ಆಡಳಿತ ಮಂಡಳಿಗಳಿಂದ ಈ ಕಛೇರಿಯಲ್ಲಿ ಸ್ವೀಕೃತವಾಗಿರುವ ಮನವಿಗಳು.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2016-17ನೇ ಸಾಲಿನ ಆನ್‌ಲೈನ್ ಮುಖಾಂತರ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1)(ಸಿ) ಅಡಿ ದಾಖಲಾದ ಮಕ್ಕಳ ಶುಲ್ಕಮರುಪಾವತಿ ಮಾಡುವ ಬಗ್ಗೆ ಉಲ್ಲೇಖಗಳಂತೆ ಅನುಸರಿಸಬೇಕಾದ ಕ್ರಮಗಳ ಬಗ್ಗೆ ರಾಜ್ಯ ಹಂತದಲ್ಲಿ ವಿವಿಧ ದಿನಾಂಕಗಳಲ್ಲಿ ತರಬೇತಿ ನೀಡಲಾಗಿದೆ.

2012-13ನೇ ಸಾಲಿನಿಂದ 2016-17ನೇ ಸಾಲಿನವರೆಗೆ ಆರ್.ಟಿ.ಇ ಅಡಿಯಲ್ಲಿ ದಾಖಲಾತಿ ನೀಡಿ ನಂತರದ ವರ್ಷಗಳಲ್ಲಿ ಅಲ್ಪಸಂಖ್ಯಾತ ಶಾಲೆಗಳೆಂದು ಪ್ರಮಾಣ ಪತ್ರ ಪಡೆದು ಆರ್.ಟಿ.ಇ ದಾಖಲಾತಿಯಿಂದ ಕೆಲವು ಶಾಲೆಗಳು

ವಿನಾಯಿತಿ ಪಡೆದಿರುತ್ತವೆ. ಅಂತಹ ಶಾಲೆಗಳಲ್ಲಿ ಹಿಂದಿನ ಸಾಲುಗಳಲ್ಲಿ ಆರ್.ಟಿ.ಇ ಅಡಿ ದಾಖಲಾತಿಯಾದ ವಿದ್ಯಾರ್ಥಿಗಳು ಅದೇ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮುಂದುವರೆಸಬೇಕಾಗಿರುತ್ತದೆ. ಅಂತಹ ವಿದ್ಯಾರ್ಥಿಗಳಿಗೆ 2016-17ನೇ ಸಾಲಿನಲ್ಲಿ ಶುಲ್ಕಮರುಪಾವತಿಯನ್ನು ಮಾಡಬೇಕಾಗಿರುತ್ತದೆ. ಈ ಬಗ್ಗೆ ಕೆಲವು ಶಾಲೆಗಳಿಂದ ಶುಲ್ಕಮರುಪಾವತಿ ನೀಡುವಂತೆ ಕೋರಿಕೆಗಳು ಬರುತ್ತಿವೆ. ಶಾಲೆಗಳಿಂದ ನೇರವಾಗಿ ಈ ಕಾರ್ಯಾಲಯಕ್ಕೆ ಬಂದಿರುವ ಮನವಿಗಳನ್ನು ಪರಿಗಣಿಸಿರುವುದಿಲ್ಲ. ಆದುದರಿಂದ 2012-13ನೇ ಸಾಲಿನಿಂದ 2016-17ನೇ ಸಾಲಿನವರೆಗೆ ಆರ್.ಟಿ.ಇ ಅಡಿ ದಾಖಲಾತಿಯಾದ ನಂತರದಲ್ಲಿ ಅಲ್ಪಸಂಖ್ಯಾತ ಶಾಲೆಗಳೆಂದು ಪ್ರಮಾಣ ಪತ್ರ ಪಡೆದಿರುವ ಎಲ್ಲಾ ಅಲ್ಪಸಂಖ್ಯಾತ ಶಾಲೆಗಳ ಜಿಲ್ಲಾವಾರು ಕ್ರೋಢೀಕೃತ ಮಾಹಿತಿಯನ್ನು ಕೆಳಕಾಣಿಸಿದ ನಮೂನೆ (Excel Sheet) ಯಲ್ಲಿ ಸಲ್ಲಿಸಲು ತಿಳಿಸಿದೆ. ಅಂತಹ ಶಾಲೆಗಳ ಮಾಹಿತಿಯನ್ನು ಶುಲ್ಕಮರುಪಾವತಿ ತಂತ್ರಾಂಶದಲ್ಲಿ ಸೇರಿಸಲು ಅವಕಾಶ ಮಾಡಿಕೊಡಲಾಗುವುದು.

| ಕ್ರ.ಸಂ | ಜಿಲ್ಲೆ | ತಾಲ್ಲೂಕು / ವಲಯ | ಶಾಲೆಯ ಹೆಸರು | ಡೈಸ್ ಸಂಖ್ಯೆ | ಅಲ್ಪ ಸಂಖ್ಯಾತ ಪ್ರಮಾಣ ಪತ್ರದ ಸಂಖ್ಯೆ ಮತ್ತು ದಿನಾಂಕ | ಆರ್.ಟಿ.ಇ ವಿದ್ಯಾರ್ಥಿಗಳ ಸಂಖ್ಯೆ | ಶುಲ್ಕ ಮರು ಪಾವತಿ ತಂತ್ರಾಂಶದಲ್ಲಿ ಶಾಲೆ ಹೆಸರು ಇದೆ / ಇಲ್ಲ | ಶುಲ್ಕ ಮರು ಪಾವತಿ ತಂತ್ರಾಂಶದಲ್ಲಿ ಬೇಡಿಕೆ ಸಲ್ಲಿಸಿದ್ದಾರೆ/ ಇಲ್ಲ | ಷರಾ |
|---|---|---|---|---|---|---|---|---|---|
| 1 | | | | | | | | | |
| 2 | | | | | | | | | |

ಮೇಲ್ಕಂಡ ಎಲ್ಲಾ ಅಂಶಗಳ ಅನ್ವಯ ಒದಗಿಸಿದ ಶಾಲೆಗಳ ಮಾಹಿತಿಯನ್ನು ಶುಲ್ಕಮರುಪಾವತಿ ತಂತ್ರಾಂಶದಲ್ಲಿ ಅಲವಡಿಸಲಾಗುವುದು. ನಂತರದಲ್ಲಿ ಅಂತಹ ಶಾಲೆಗಳ ಬೇಡಿಕೆಯನ್ನು ತಂತ್ರಾಂಶದ ಮೂಲಕ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಿದಲ್ಲಿ ಆಯಾ ಜಿಲ್ಲೆಗಳ ಅನುಮೋದಿಸಿದ ಬೇಡಿಕೆಯನ್ನು ಪರಿಗಣಿಸಿ ಶುಲ್ಕಮರುಪಾವತಿಯನ್ನು ಬಿಡುಗಡೆ ಮಾಡಲಾಗುವುದು. ಈ ರೀತಿ ಬಿಡುಗಡೆಯಾದ ಶುಲ್ಕಮರುಪಾವತಿಯನ್ನು ಉಪನಿರ್ದೇಶಕರು (ಆಡಳಿತ) ಇವರು ಖಜಾನೆ-2 ತಂತ್ರಾಶದ ಮೂಲಕ ಆಯಾ ಶಾಲೆಗಳ ಖಾತೆಗೆ ಜಮಾ ಮಾಡಲಾಗುವುದು. ಶುಲ್ಕ ಮರುಪಾವತಿಯನ್ನು ಪಡೆಯಲು ಇಚ್ಛಿಸದ ಶಾಲೆಗಳ ಪಟ್ಟಿಯನ್ನು ನಿರ್ದಿಷ್ಟ ಕಾರಣ ಸಹಿತ ಪ್ರತ್ಯೇಕವಾಗಿ ಸಲ್ಲಿಸುವುದು.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ,

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ ಇ-ಮೇಲ್ ಮುಖಾಂತರ
2. ರಾಜ್ಯದ ಎಲ್ಲಾ ವಲಯ/ತಾಲ್ಲೂಕುಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ ಇ-ಮೇಲ್ ಮುಖಾಂತರ.